ಮಾಡುತ್ತೇವೆ. ಆಗ ಖಂಡಿತ ಏನು ಸಿದ್ದು ಸವದಿಯವರು ಪ್ರಸ್ತಾಪ ಮಾಡಿದ್ದಾರೆ ಅದನ್ನು ನಾವು ಗಮನಿಸಿ ಕ್ರಮ ತೆಗೆದುಕೊಳ್ಳುತ್ತೇವೆ.

ಶ್ರೀ ಶ್ರೀಕಾಂತ್ ಕುಲಕರ್ಣಿ(ಜಮಖಂಡಿ):- ಮಾನ್ಯ ಅಧ್ಯಕ್ಷರೆ, ಬರೀ ತಾಲ್ಲೂಕುಗಳೂ ಮಾತ್ರವಲ್ಲ ಹೊಸ ಜಿಲ್ಲೆಗಳನ್ನು ಮಾಡುವುದರ ಬಗ್ಗೆ ಕೂಡ ಚರ್ಚೆ ಆಗಬೇಕಾಗಿದೆ. ನಮ್ಮೆಲ್ಲರ ಅಭಿಪ್ರಾಯದ ಪ್ರಕಾರ ಜಮಖಂಡಿ ಒಂದು ಹೊಸ ಜಿಲ್ಲೆ ಮಾಡಲಿಕ್ಕೆ ಬಹಳಷ್ಟು ಯೋಗ್ಯ ಇದೆ. ಮುಧೋಳ್, ಬೀಳಗಿ, ಜಮಖಂಡಿ, ಅಥಣಿ, ಎಲ್ಲಾ ಸೇರಿಸಿ ಒಂದು ಹೊಸ ಜಿಲ್ಲೆ ಮಾಡಿದರೆ, ಅಭಿವೃದ್ಧಿ ದೃಷ್ಟಿಯಿಂದ ಇನ್ನಷ್ಟು ಅನುಕೂಲವಾಗುತ್ತದೆ ಎಂದು ಮಾನ್ಯ ಮಂತ್ರಿಗಳಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ.

ಶ್ರೀ ಕೆ.ಲಕ್ಷ್ಮೀನಾರಾಯಣ(ಬೈಂದೂರು):- ಮಾನ್ಯ ಅಧ್ಯಕ್ಷರೆ, ತಾಲ್ಲೂಕುಗಳನ್ನು ಮಾಡುವಾಗ ಬಹಳ ಹಿಂದುಳಿದಿರುವಂತಹ ಮೈಸೂರನ್ನು ಕೂಡ ಪರಿಗಣಿಸಬೇಕೆಂದು ಮಾನ್ಯ ಸದಸ್ಯರಲ್ಲಿ ಮನವಿ ಮಾಡಿಕೊಳ್ಳುತ್ತೇನೆ.

3. ವಿತ್ತೀಯ ಕಾರ್ಯಕಲಾಪ

ಅ) 2011–12ನೇ ಸಾಲಿನ ಪೂರಕ ಅಂದಾಜು(ಒಂದನೇ ಕಂತು) ಮಂಡನೆ ಹಾಗೂ ಚರ್ಚೆ.

ಅಧ್ಯಕ್ಷರು:- ಈಗ ಸನ್ಮಾನ್ಯ ಮುಖ್ಯಮಂತ್ರಿಗಳೂ 2011–12ನೇ ಸಾಲಿನ ಪೂರಕ ಅಂದಾಜುಗಳನ್ನು ಮಂಡಿಸುವುದು.

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೆ, 2011–12ನೇ ಸಾಲಿನ ಪೂರಕ ಅಂದಾಜುಗಳನ್ನು ಮಂಡಿಸುತ್ತೇನೆ. ಹಾಗೂ ಇದನ್ನು ಮತಕ್ಕೆ ಹಾಕಬೇಕೆಂದು ಕೋರುತ್ತೇನೆ. ಪೂರಕ ಅಂದಾಜುಗಳ ಗಾತ್ರ 1965.28 ಕೋಟಿ ರೂ. ಇದರಲ್ಲಿ ಪ್ರಮುಖ ಅಂಶಗಳು ಏನೆಂದರೆ, ಕೆರೆ ಪುನರುಜ್ಜೀವನ ಯೋಜನೆ 840 ಕೋಟಿ ರೂ. ರಸ್ತೆ ಜಾಲ ಅಭಿವೃದ್ಧಿ ಯೋಜನೆ 800 ಕೋಟಿ supplementary ಅಂದಾಜುಗಳ ಮೇಲೆನ ವೆಚ್ಚದ ಉಳಿತಾಯದ ಬಾಬ್ತು 840 ಕೋಟಿ ರೂ. ಸಾಮಾನ್ಯ ತೆರಿಗೆ ಮತ್ತು ತೆರಿಗೆಯೇತರ ವಸೂಲಾತಿಗಾಗಿ 1068.04 ಕೋಟಿ ರೂ. ಕೇಂದ್ರ ಸರ್ಕಾರದ ನೆರವಾದ 41.37 ಕೋಟಿ ರೂ.ಗಳು ಹಾಗೂ ಲೆಕ್ಕ ಹೊಂದಾಣಿಕೆಗೆ 15.94 ಕೋಟಿ ರೂ. ಗಳಿಂದ ಭರಿಸಲಾಗುವುದು. ಇದಕ್ಕೆ ಮಂಜೂರಾತಿ ನೀಡಬೇಕೆಂದು ಸದನವನ್ನು ಈ ಸಂದರ್ಭದಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ.

ಅಧ್ಯಕ್ಷರು:- ಪ್ರಸ್ತಾವ ಮಂಡಿಸಲಾಯಿತು.

ಬಿ.ಎಸ್. ಯಡಿಯೂರಪ್ಪ(ಮುಖ್ಯ ಮಂತ್ರಿಗಳು):- ಮಾನ್ಯ ಅಧ್ಯಕ್ಷರೆ, 20011–12ನೇ ಸಾಲಿನ ಪೂರಕ ಅಂದಾಜುಗಳು ಮೊದಲನೇ ಕಂತಿನ ಅನುದಾನ ಬೇಡಿಕೆಗಳಿಗೆ ಸಂಬಂಧಿಸಿದ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕಿಬೇಕೆಂದು ತಮ್ಮಲ್ಲಿ ಕೋರುತ್ತೇನೆ. ದಿನಾಂಕ 31.03.2012 ಕ್ಕೆ ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1,2,3,4,5,7,8,9,11,13,14,17,18,19,20,21,22,23,24,25 ಮತ್ತು 26 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗು ಸೇರಿದಂತೆ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆ ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲಾಯಿತು.

ಅಧ್ಯಕ್ಷರು:- 2011–12ನೇ ಸಾಲಿನ ಪೂರಕ ಅಂದಾಜುಗಳು ಮೊದಲನೇ ಕಂತಿನ ಅನುದಾನ ಬೇಡಿಕೆಗಳಿಗೆ ಸಂಬಂಧಿಸಿದ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವ ಹೀಗಿದೆ,

"ದಿನಾಂಕ 31.03.2012 ಕ್ಕೆ ಕೊನೆಗೊಳ್ಳವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1,2,3,4,5,7,8,9,11,13,14,17,18,19,20,21,22, 23,24,25 ಮತ್ತು 26 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆ ಮಂಜೂರು ಮಾಡುವುದು."

ಪ್ರಸ್ತಾವದ ಪರವಾಗಿರುವವರು ಹೌದು ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು ಇಲ್ಲವೆಂದು ಸೂಚಿಸಬೇಕು.

ಪ್ರಸ್ತಾವ ಹೌದು ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವ ಹೌದು ಎನ್ನುವವರ ಪರವಾಗಿವೆ.

ಪ್ರಸ್ತಾವ ಹೌದು ಎನ್ನುವವರ ಪರವಾಗಿವೆ.

ಪ್ರಸ್ತಾವವು ಅಂಗೀಕೃತವಾಗಿದೆ.

ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಪೂರಕ ಅಂದಾಜುಗಳನ್ನು ಮಂಜೂರು ಮಾಡಲಾಯಿತು.

ಅಭಿಯಾಚನೆ ಕ್ರಮಾಂಕ: 1 ಕೃಷಿ ಮತ್ತು ತೋಟಗಾರಿಕೆ

" 31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕೃಷಿ ಮತ್ತು ತೋಟಗಾರಿಕೆ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2704.70 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 2 ಪಶು ಸಂಗೋಪನೆ ಮತ್ತು ಮೀನುಗಾರಿಕೆ

" 31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ಬಂಡವಾಳ ಖಾತೆಯಲ್ಲಿ 1,00 ಲಕ್ಷ ರೂಪಾಯಿಗಳಿಗಿಂತ ಮೀರಿದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 3 ಆರ್ಥಿಕ

" 31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಆರ್ಥಿಕ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಹಾಗೂ ಬಂಡವಾಳ ಖಾತೆಯಲ್ಲಿ 497.00 ಹಾಗೂ 113.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 4 ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

" 31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 25.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ:5 ಒಳಾಡಳಿತ ಮತ್ತು ಸಾರಿಗೆ

" 31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಒಳಾಡಳಿತ ಮತ್ತು ಸಾರಿಗೆ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 10.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 7 ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

" 31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಮತ್ತು ಬಂಡವಾಶ ಖಾತೆಯಲ್ಲಿ 4619.30 ಹಾಗೂ 56600.02 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 8 ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ಬಂಡವಾಳ ಖಾತೆಯಲ್ಲಿ 1542.05 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 9 ಸಹಕಾರ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಹಕಾರ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ಬಂಡವಾಳ ಖಾತೆಯಲ್ಲಿ 241.77 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 11 ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 5323.29 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 13 ಆಹಾರ ಮತ್ತು ನಾಗರೀಕ ಸರಬರಾಜು

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 30.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 14 ಕಂದಾಯ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕಂದಾಯ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು

ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1320.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 17 ಶಿಕ್ಷಣ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಶಿಕ್ಷಣ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1072.15 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 18 ವಾಣಿಜ್ಯ ಮತ್ತು ಕೈಗಾರಿಕೆ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಮತ್ತು ಬಂಡವಾಳ ಖಾತೆಯಲ್ಲಿ 1496.72 ಹಾಗೂ 1638.81 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 19 ನಗರಾಭಿವೃದ್ಧಿ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ನಗರಾಭಿವೃದ್ಧಿ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 99.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 20 ಲೋಕೋಪಯೋಗಿ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಲೋಕೋಪಯೋಗಿ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಹಾಗೂ ಬಂಡವಾಳ ಖಾತೆಯಲ್ಲಿ 250.00 81000.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 21 ಜಲ ಸಂಪನ್ಮೂಲ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಜಲ ಸಂಪನ್ಮೂಲ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ಬಂಡವಾಳ ಖಾತೆಯಲ್ಲಿ 28000.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 22 ಆರೋಗ್ಯ ಮತ್ತು ಕುಟುಂಬ ಕಲ್ಯಾಣ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ

ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಹಾಗೂ ಬಂಡವಾಳ ಖಾತೆಯಲ್ಲಿ 1764.44 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 23 ಕಾರ್ಮಿಕ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕಾರ್ಮಿಕ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2227.20 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 24 ಇಂಧನ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಇಂಧನ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 200.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 25 ಕನ್ನಡ ಮತ್ತು ಸಂಸ್ಕೃತಿ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ಬಂಡವಾಳ ಖಾತೆಯಲ್ಲಿ 1500.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

ಅಭಿಯಾಚನೆ ಕ್ರಮಾಂಕ: 26 ಯೋಜನೆ, ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ

"31.03.2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಯೋಜನೆ, ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಹಾಗೂ ಬಂಡವಾಳ ಖಾತೆಯಲ್ಲಿ 2994.00 173.00 ಲಕ್ಷ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರು ಮಾಡುವುದು."

[4] ಶಾಸನ ರಚನೆ

(ಅ) ಕರ್ನಾಟಕ ಧನ ವಿನಿಯೋಗ (ಸಂಖ್ಯೆ 4) ವಿಧೇಯಕ 2011

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ(ಮಾನ್ಯ ಮುಖ್ಯ ಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, 2011ರ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.